# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 219(1511)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪ್ರದೀಪ್ ಶೆಟ್ಟರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮುಖ್ಯಮಂತ್ರಿಗಳು

ವಿಷಯ : ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯಗಳ ಬಗ್ಗೆ

(ಅ) ಕರ್ನಾಟಕ ಲೋಕಸೇವಾ ಆಯೋಗದ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯುವಂತಹ ಸಂದರ್ಭದಲ್ಲಿ ಕೈಗೊಳ್ಳುವತಂಹ ಸುರಕ್ಷತಾ ಕ್ರಮಗಳೇನು;

(ಆ) ಲೋಕಸೇವಾ ಆಯೋಗವು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವಂಥಹ ಸಂದರ್ಭದಲ್ಲಿ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗುತ್ತಿದ್ದು, ಇದರ ಬಗ್ಗೆ ಆಯೋಗವು ಕೈಗೊಂಡಿರುವ ಕ್ರಮಗಳೇನು;

(ಇ) ಲೋಕಸೇವಾ ಆಯೋಗದ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಬೇರೆ ಇಲಾಖೆಗಳಿಗೆ ವರ್ಗಾವಣೆ ಮಾಡಲು ನಿಯಮಾವಳಿಗಳಲ್ಲಿ ಅವಕಾಶವಿದೆಯೇ;

(ಈ) ಲೋಕಸೇವಾ ಆಯೋಗದ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಿಭಾಗದಲ್ಲಿ ದೀರ್ಘಕಾಲೀನವಾಗಿ ಮೂರು ವರ್ಷಗಳಿಗಿಂತ ಹೆಚ್ಚಿನ ಅವಧಿ ಒಂದೇ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಆಂತರಿಕ ವರ್ಗಾವಣೆಗೆ ಸಂಬಂಧಿಸಿದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?